## 9. ಕೋವಿಡ್ ಪರೀಕ್ಷೆ ಸರ್ಟಿಫಿಕೇಟ್ ತೋರಿಸಿದರೆ ಕಲಾಪಕ್ಕೆ ಪ್ರವೇಶ

ಕೋವಿಡ್ 19 ಲಾಕ್‌ಡೌನ್ ಮತ್ತು ಆ ಬಳಿಕ ಹೊರಡಿಸಿದ ಪ್ರಮುಖ 19 ಸುಗ್ರೀವಾಜ್ಞೆಗಳು ಸೇರಿ ಒಟ್ಟು 31 ಮಸೂದೆಗಳನ್ನು ಸೆಪ್ಟೆಂಬರ್ 21 ರಿಂದ ಆರಂಭಗೊಳ್ಳಲಿರುವ ವಿಧಾನ ಸಭಾ ಅಧಿವೇಶನದಲ್ಲಿ ಸರ್ಕಾರ ಮಂಡಿಸಲಿದೆ.

ವೈಯಕ್ತಿಕ ಅಂತರ, ಸೋಂಕು ನಿರೋಧಕ ವ್ಯವಸ್ಥೆಯ ಕಠಿಣ ಕ್ರಮಗಳ ಮಧ್ಯೆ ವಿಧಾನ ಸಭೆ ಅಧಿವೇಶನ ನಡೆಸಲು ಸಕಲ ಸಿದ್ಧತೆ ನಡೆಸಲಾಗಿದೆ. ಎಂಟು ದಿನಗಳ ಕಲಾಪದಲ್ಲಿ ಎಲ್ಲ ಮಸೂದೆಗಳಿಗೂ ಒಪ್ಪಿಗೆ ಪಡೆಯಬೇಕು. ಅಲ್ಲದೆ ಅಧಿವೇಶನದಲ್ಲಿ ಪ್ರಶ್ನೋತ್ತರಕ್ಕೂ ಅವಕಾಶ ನೀಡಲಾಗಿದೆ ಎಂದು ವಿಧಾನ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ, ಕಾಗೇರಿ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಕೊರೋನಾ ಸೋಂಕು ಇರುವುದರಿಂದ ಸಾಕಷ್ಟು ಮುಂಜಾಗ್ರತೆ ವಹಿಸಲಾಗುವುದು. ಇದರ ಅಂಗವಾಗಿ ಎಲ್ಲ ಶಾಸಕರು, ಸಚಿವರು, ವಿಧಾನ ಸಭೆ ಕಲಾಪಕ್ಕೆ ಹಾಜರಾಗಬೇಕಾದ ಅಧಿಕಾರಿಗಳು ಮತ್ತು ಮಾಧ್ಯಮ ಪ್ರತಿನಿಧಿಗಳು ಅಧಿವೇಶನ ಆರಂಭವಾಗುವುದಕ್ಕೆ ಮೂರು ದಿನಗಳ ಮೊದಲು ಕೋವಿಡ್ ಪರೀಕ್ಷೆ ಮಾಡಿಸಿಕೊಂಡು, ಸರ್ಟಿಫಿಕೇಟ್ ಕಡ್ಡಾಯವಾಗಿ ತರಬೇಕು. ಕೋವಿಡ್ ಸೋಂಕು ಇಲ್ಲದಿದ್ದರೆ ಮಾತ್ರ ಸದನಕ್ಕೆ ಪ್ರವೇಶ ನೀಡಲಾಗುವುದು ಎಂದರು.

70 ವರ್ಷ ಮೇಲ್ಪಟ್ಟ ಸದಸ್ಯರು ಕಲಾಪಕ್ಕೆ ಹಾಜರಾಗಬಹುದು. ಕಟ್ಟುನಿಟ್ಟಾಗಿ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳಬೇಕು. ಕಲಾಪಕ್ಕೆ ಹಾಜರಾಗುವ ಎಲ್ಲರಿಗೂ ಮಾಸ್ಕ್ ಮತ್ತು ಫೇಸ್ ಶೀಲ್ಡ್ ನೀಡಲಾಗುವುದು ಎಂದು ಸಭಾಧ್ಯಕ್ಷರು ತಿಳಿಸಿದರು.

ಸಾರ್ವಜನಿಕರಿಗೆ ಈ ಬಾರಿ ಕಲಾಪ ವೀಕ್ಷಣೆಗೆ ಪ್ರವೇಶ ಇರುವುದಿಲ್ಲ. ಪ್ರೇಕ್ಷಕರ ಗ್ಯಾಲರಿಯಲ್ಲಿ ಮಾಧ್ಯಮ ಪ್ರತಿನಿಧಿಗಳಿಗೆ ವ್ಯವಸ್ಥೆ ಮಾಡಲಾಗುವುದು. ಮುಂದಿನ ಅಧಿವೇಶನದಲ್ಲಿ ಈ ಹಿಂದಿನಂತೆ ಮಾಧ್ಯಮಗಳ ಗ್ಯಾಲರಿಯಲ್ಲಿ ಪತ್ರಕರ್ತರಿಗೆ ಅವಕಾಶ ನೀಡಲಾಗುವುದು ಎಲ್ಲ ಮಸೂದೆಗಳಿಗೆ ಅಂಗೀಕಾರ ಪಡೆಯಬೇಕಾಗಿದೆ. ಈ ಎಲ್ಲ ವಿಷಯಗಳ ಬಗ್ಗೆ ಕಲಾಪ ಸಲಹಾ ಸಮಿತಿ ಸಭೆಯಲ್ಲಿ ಚರ್ಚೆ ನಡೆಸಲಾಗುವುದು ಎಂದು ಸಭಾಧ್ಯಕ್ಷರು ತಿಳಿಸಿದರು.

ಸರ್ಕಾರ ಹೊರಡಿಸಿರುವ ಒಟ್ಟು 19 ಸುಗ್ರೀವಾಜ್ಞೆಗಳಲ್ಲಿ ಈ ಕೆಳಕಂಡ ಸುಗ್ರೀವಾಜ್ಞೆಗಳ ಬಗ್ಗೆ ವಿರೋಧ ಪಕ್ಷಗಳು ಮತ್ತು ಸಂಘ ಸಂಸ್ಥೆಗಳು ವಿರೋಧ ವ್ಯಕ್ತಪಡಿಸಿ, ಅವುಗಳನ್ನು ಹಿಂದಕ್ಕೆ ಪಡೆಯಬೇಕು ಎಂದು ಹೋರಾಟ ನಡೆಸಿವೆ.

- ಕರ್ನಾಟಕ ಭೂ ಸುಧಾರಣೆ (ತಿದ್ದುಪಡಿ) ಸುಗ್ರೀವಾಜ್ಞೆ
- ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) ತಿದ್ದುಪಡಿ ಸುಗ್ರೀವಾಜ್ಞೆ,
- ಕರ್ನಾಟಕ ಕೈಗಾರಿಕೆಗಳ ಸೌಲಭ್ಯ ತಿದ್ದುಪಡಿ ಸುಗ್ರೀವಾಜ್ಞೆ
- ಕರ್ನಾಟಕ ಭೂ ಕಬಳಿಕೆ ನಿಷೇಧ ತಿದ್ದುಪಡಿ ಸುಗ್ರೀವಾಜ್ಞೆ
- ಕೈಗಾರಿಕಾ ವಿವಾದಗಳು ಮತ್ತು ಕೆಲವು ಇತರ ಕಾನೂನುಗಳ (ಕರ್ನಾಟಕ ತಿದ್ದುಪಡಿ) ಸುಗ್ರೀವಾಜ್ಞೆ

ಆಧಾರ:ಪ್ರಜಾವಾಣಿ, ದಿನಾಂಕ:09.09.2020